ರಾಜ್ಯದಲ್ಲಿರುವ ವಿಶ್ವವಿದ್ಯಾನಿಲಯಗಳು

೮೭೫. ಶ್ರೀ ಬಿ. ಆರ್. ನೀಲಕಂಠಪ್ಪ (ತರೀಕೆರೆ).— ಮಾನ್ಯ ಉನ್ನತ ಶಿಕ್ಷಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ರಾಜ್ಯದಲ್ಲಿ ಎಷ್ಟು ವಿಶ್ವವಿದ್ಯಾನಿಲಯಗಳಿವೆ ?

ಆ) ಇವುಗಳ ಸಂಖ್ಯೆಯನ್ನು ಹೆಚ್ಚಿಸುವ ಉದ್ದೇಶವೇನಾದರೂ ಇದೆಯೇ ?

ಶ್ರೀ ಜೀವರಾಜ ಆಳ್ವ (ಉನ್ನತ ಶಿಕ್ಷಣ ಸಚಿವರು).—

ಅ) ೬

ಆ) ಪ್ರಶ್ನೆ ಉದ್ಭವಿಸುವುದಿಲ್ಲ.

ಪ್ರಾಥಮಿಕ ಶಾಲೆಗಳಿಗೆ ಕೊಠಡಿಗಳನ್ನು ಹೆಚ್ಚಿಸುವ ಬಗ್ಗೆ

೮೭೪. ಶ್ರೀ ಬಿ. ಆರ್. ನೀಲಕಂಠಪ್ಪ (ತರೀಕೆರೆ).— ಪ್ರಾಥಮಿಕ ಮತ್ತು ಮಾಧ್ಯಮಿಕ ಶಿಕ್ಷಣ ರಾಜ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ತರೀಕೆರೆ ತಾಲ್ಲೂಕಿನಲ್ಲಿ ಪ್ರಾಥಮಿಕ ಶಾಲೆಗಳ ಕೊಠಡಿಗಳ ಕೊರತೆ ಇರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ ?

ಆ) ಹಾಗಿದ್ದಲ್ಲಿ ಅವಶ್ಯಕ ಕೊಠಡಿಗಳನ್ನು ಪೂರೈಸಲು ಸರ್ಕಾರದವರು ಕ್ರಮ ಕೈಗೊಂಡಿದ್ದಾರೆಯೇ ?

ಶ್ರೀ ಬಿ. ಸೋಮಶೇಖರ್ (ಪ್ರಾಥಮಿಕ ಮತ್ತು ಮಾಧ್ಯಮಿಕ ಶಿಕ್ಷಣ ರಾಜ್ಯ ಮಂತ್ರಿಗಳು).—

ಅ) ಬಂದಿದೆ.

ಆ) ಅವಶ್ಯಕ ಪ್ರಾಥಮಿಕ ಶಾಲಾ ಕೊಠಡಿಗಳನ್ನು ನಿರ್ಮಿಸಲು ಚಿಕ್ಕಮಗಳೂರು ಜಿಲ್ಲಾಪರಿಷತ್ತನ್ನು ಮುಂದಿನ ಕ್ರಮ ಜರುಗಿಸಲು ಕೋರಲಾಗಿದೆ.

ಬಸವನಹಳ್ಳಿ ಕೆರೆ ನಿರ್ಮಾಣಕ್ಕೆ ಹಣ ಮಂಜೂರಾತಿ

೯೩೯. ಶ್ರೀ ಬಿ. ಆರ್. ನೀಲಕಂಠಪ್ಪ (ತರೀಕೆರೆ).— ಮಾನ್ಯ ಸಣ್ಣ ನೀರಾವರಿ ಮತ್ತು ಏತ ನೀರಾವರಿ ರಾಜ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ೧೯೮೭–೮೮ನೇ ಸಾಲಿನಲ್ಲಿ ತರೀಕೆರೆ ತಾಲ್ಲೂಕು ಬೆಟ್ಟದ ಹಳ್ಳಿ ಬಸವನಹಳ್ಳಿ ಕೆರೆಗೆ ಎಷ್ಟು ಹಣ ನಿಯೋಜಿಸಲಾಗಿದೆ ?

ಆ) ಆ ಪೈಕಿ ಬಿಡುಗಡೆ ಮಾಡಿದ ಹಣವೆಷ್ಟು ?

ಶ್ರೀ ಹೆಚ್. ಡಿ. ದೇವೇಗೌಡ (ಲೋಕೋಪಯೋಗಿ ಮತ್ತು ನೀರಾವರಿ ಮಂತ್ರಿಗಳು):—

ಅ) ೧೯೮೭–೮೮ನೇ ಸಾಲಿನಲ್ಲಿ ಈ ಕೆರೆಗೆ ೧೪ ಲಕ್ಷ ರೂ.ಗಳ ಅನುದಾನ ಒದಗಿಸಲಾಗಿದೆ.

ಆ) ಚಿಕ್ಕಮಗಳೂರು ಜಿಲ್ಲಾ ಪರಿಷತ್ತಿನಿಂದ ಅನುದಾನದ ಬಿಡುಗಡೆಯ ಬಗ್ಗೆ ಯಾವುದೇ ಕೋರಿಕೆ ಬಂದಿಲ್ಲವಾದುದರಿಂದ, ಪ್ರಶ್ನೆ ಉದ್ಭವಿಸುವುದಿಲ್ಲ.